# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/2020-21 ದಿನಾಂಕ : 01-04-2021

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 21-09-2020.

-****-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪ ವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-59 ಮಾರುತಿ ಸೇವಾನಗರ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನದಲ್ಲಿ ದಿನಾಂಕ: 03-04-2021 ರಂದು ಬೆಳಿಗ್ಗೆ 11.00 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ಹಿಂದಿನ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ. |
| 3 | ವಾರ್ಡ್ ವ್ಯಾಪ್ತಿಯ ಕಾಮಗಾರಿಗಳು, ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ. |
| 4 | ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಮತ್ತು ಮಳೆ ನೀರಿನ ಸಮಸ್ಯೆಯ ಬಗ್ಗೆ ಚರ್ಚಿಸುವ ವಿಚಾರ. |
| 5 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 6 | ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಚಾರಗಳು |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/-

ಕಾರ್ಯದರ್ಶಿ ವಾರ್ಡ್ ಸಮಿತಿ-59

ಹಾಗೂ ಸಹಾಯಕ ಅಭಿಯಂತರರು,

ವಾರ್ಡ್-59

ಪ್ರತಿಯನ್ನು

1. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.

ಪು.ತಿ.ನೋ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಕಛೇರಿ ಸಭಾಂಗಣದಲ್ಲಿ ದಿನಾಂಕ: 03-04-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ ಎ.ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ನಿರೀಕ್ಷಕರು

**ಹಾಜರಿದ್ದ ಅಧಿಕಾರಿಗಳು/ಸ್ಥಳೀಯರು**

1. ಡಾ॥ ವಿನುತಾ, ವೈದ್ಯಾಧಿಕಾರಿಗಳು,
2. ಶ್ರೀ ನಾಗರಾಜ್ ಜಿ.ವಿ ಅಸೆಸ್ಸರ್,
3. ಶ್ರೀ ಅಶೋಕ್.ಎಂ.ಎಸ್, ಪೊಲೀಸ್ ಹೆಡ್ ಕಾನ್ಸ್‌ಟೆಬಲ್, ಪುಲಿಕೇಶಿನಗರ ಪೊಲೀಸ್ ಠಾಣೆ
4. ಶ್ರೀ ಯೋಗೀಶ್ ಎಂ.ಎಸ್ ಮಾರ್ಷಲ್,
5. ಶ್ರೀ ನವೀನ್ ಕುಮಾರ್, ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
6. ಶ್ರೀ ಮೆಹಬೂಬ್ ಪಾಷಾ, ಸ್ಥಳೀಯರು
7. ಶ್ರೀ ಸಂಪೂರ್ಣ.ಕೆ ಶಿಕ್ಷಕರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಮಾಹಿತಿ | ಕ್ರಮ |
|---|---|---|
| i | **ಘನತ್ಯಾಜ್ಯ ನಿರ್ವಹಣೆ (SWM Department)** | |
| | ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಪ್ರದೇಶದಲ್ಲಿ ಮನೆ ಮನೆಗಳಿಂದ ದಿನನಿತ್ಯ ಆಟೋ ಟಿಪ್ಪರ್‌ಗಳಿಂದ ಕಸ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | **ಘನತ್ಯಾಜ್ಯ ನಿರ್ವಹಣೆ (SWM Department)** ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು. |
| ii | **ಕಾರ್ಯಪಾಲಕ ಅಭಿಯಂತರರು, (ಓ.ಎಫ್.ಸಿ)** | |
| | ವಾರ್ಡ್ ವ್ಯಾಪ್ತಿಯ ಬಾಣಸವಾಡಿ ಮುಖ್ಯರಸ್ತೆಯಲ್ಲಿ ಓ.ಎಫ್‌ಸಿ ರವರು ಕೇಬಲ್ ಅಳವಡಿಸಲು ರಸ್ತೆಯನ್ನು ಅಗೆಯುತ್ತಿದ್ದು, ಇದರಿಂದ ಬೆಸ್ಕಾಂ ಇಲಾಖೆಯ ಕೇಬಲ್‌ಗಳು ಹಾಳಾಗುತ್ತಿದ್ದು, ವಾರ್ಡಿನಲ್ಲಿ ಪದೇ ಪದೇ ವಿದ್ಯುತ್ ಕಡಿತವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಓ.ಎಫ್.ಸಿ ಸಂಸ್ಥೆಯ ವಿರುದ್ದ ಸೂಕ್ತ ಕೈಗೊಳ್ಳಲು ಸಭೆಗೆ ತಿಳಿಸಿದರು. | **ಕಾರ್ಯಪಾಲಕ ಅಭಿಯಂತರರು, (ಓ.ಎಫ್.ಸಿ)** ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು. |

| | | |
|---|---|---|
| iii | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) | |
| | ವಾರ್ಡ್ ವ್ಯಾಪ್ತಿಯಲ್ಲಿ ಕೊವಿಡ್ ಕೆಲಸ ಕಾರ್ಯಗಳಿಗೆ ನಿಯೋಜಿಸಿರುವ ಶಿಕ್ಷಕರುಗಳಿಗೆ ಮಾಸ್ಕ್, ಸ್ಯಾನಿಟೈಸರ್ ಕಿಟ್‌ಗಳನ್ನು ಪೂರ್ವ ವಲಯದ ಆರೋಗ್ಯಾಧಿಕಾರಿಗಳಿಂದ ಪಡೆದು ವಿತರಿಸಲು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) ರವರು ಈ ಬಗ್ಗೆ ಕ್ರಮ ವಹಿಸಲು ಸಭೆಯು ಸೂಚಿಸಲಾಯಿತು. |
| iv | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) | |
| | ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ಕೊರೋನಾ ಪಾಸಿಟಿವ್ ಪ್ರಕರಣಗಳು ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಶಾ ವರ್ಕರ್, ಶುಚಿಗಾರರು ರವರನ್ನು ಅಳವಡಿಸಿಕೊಂಡು ಜನ ಜಾಗೃತಿ ಕಾರ್ಯವನ್ನು ನಿರ್ವಹಿಸಲು ಹಾಗೂ ಜನಸಾಮಾನ್ಯರಿಗೆ ಕರಪತ್ರಗಳನ್ನು ಹಂಚಲು ಕ್ರಮ ವಹಿಸಲು ಪೂರ್ವ ವಲಯದ ಆರೋಗ್ಯ ವೈದ್ಯಾಧಿಕಾರಿಗಳಿಗೆ ತಿಳಿಸಿದರು. | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) ರವರು ಈ ಬಗ್ಗೆ ಕ್ರಮ ವಹಿಸಲು ಸಭೆಯು ಸೂಚಿಸಲಾಯಿತು. |
| v | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) | |
| | ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜನಸಾಮಾನ್ಯರು ಇತ್ತೀಚೆಗೆ ಸಾಮಾಜಿಕ ಅಂತರ ಕಾಯ್ದುಕೊಳ್ಳದೇ ಇರುವುದು ಹಾಗೂ ಮಾಸ್ಕ್‌ಗಳನ್ನು ಹಾಕದೇ ಇರುವುದು ಕಂಡುಬಂದಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಮಾಸ್ಕ್‌ಗಳನ್ನು ಹಾಕದೇ ಇರುವ ಪ್ರಕರಣಗಳಿಗೆ ಸೂಕ್ತ ದಂಡ ವಿಧಿಸಲು ವಿಶೇಷ ಟಾಸ್ಕ್ ಫೋರ್ಸ್ ಮಾಡಿ, ದಂಡ ವಿಧಿಸಲು ಹಾಗೂ ಹೋಮ್ ಐಸೋಲೇಷನ್ ಕಿಟ್‌ಗಳನ್ನು ಫೀವರ್ ಕ್ಲಿನಿಕ್‌ಗಳಿಗೆ ನೀಡಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಲಾಯಿತು ಹಾ | ಆರೋಗ್ಯ ವೈದ್ಯಾಧಿಕಾರಿಗಳು (MOH-Sarvagna Nagara Division) ರವರು ಈ ಬಗ್ಗೆ ಕ್ರಮ ವಹಿಸಲು ಸಭೆಯು ಸೂಚಿಸಲಾಯಿತು. |
| vi | ಬೀದಿ ದೀಪಗಳ ನಿರ್ವಹಣೆ (**Street Light**) | |
| | ವಾರ್ಡ್ ವ್ಯಾಪ್ತಿಯ ಮಚಲಿಬೆಟ್ಟ ಪ್ರದೇಶದಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದರಿಂದ ರಾತ್ರಿ ಸಮಯದಲ್ಲಿ ಓಡಾಡುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಪ್ರದೇಶದಲ್ಲಿ ಕೂಡಲೇ ಬೀದಿ ದೀಪಗಳನ್ನು ಅಳವಡಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಬೀದಿ ದೀಪಗಳ ನಿರ್ವಹಣೆ (**Street Light**) ರವರು ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯು ಸರ್ವಾನುಮತದಿಂದ ಸೂಚಿಸಿತು. |
| vii | ಕಾಮಗಾರಿ ಇಲಾಖೆ (**Engineering Dept**) | |
| | ವಾರ್ಡ್ ವ್ಯಾಪ್ತಿಯ ನಾಗಯ್ಯನಪಾಳ್ಯ ಹಾಗೂ ಶಾಂತಕುಮಾರ್ ಲೇಔಟ್‌ನ ಚರಂಡಿಯಲ್ಲಿ ಹೂಳು ತುಂಬಿದ್ದು, ಇದರಿಂದ ಚರಂಡಿ ನೀರು ಸರಾಗವಾಗಿ ಹರಿಯದೇ ರಸ್ತೆಗೆ ಬರುತ್ತಿದ್ದು, ಕೂಡಲೇ ಈ ಪ್ರದೇಶಗಳಲ್ಲಿ ತುಂಬಿರುವ ಹೂಳನ್ನು ತೆರಗುಗೊಳಿಸಿ, ಚರಂಡಿ ನೀರು ಸರಾಗವಾಗಿ ಹರಿಯಲು ಅನುವು ಮಾಡಿಕೊಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಕಾಮಗಾರಿ ಇಲಾಖೆ (**Engineering Dept**) ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಿದರು. |

| viii | ಬೆಸ್ಕಾಂ (**Bescom Dept**) | |
|---|---|---|
| | ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿ ಹಾಳಾಗಿದ್ದ ವಿದ್ಯುತ್ ಕಂಬಗಳನ್ನು ಬೆಸ್ಕಾಂ ಇಲಾಖೆಯಿಂದ ತೆಗೆದು, ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲಾಗಿದ್ದು, ಹಳೆಯ ವಿದ್ಯುತ್ ಕಂಬಗಳನ್ನು ಸದರಿ ಸ್ಥಳದಿಂದ ತೆರವುಗೊಳಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಸದರಿ ಸ್ಥಳದಿಂದ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. | ಬೆಸ್ಕಾಂ (**Bescom Dept**) ರವರು ಸದರಿ ಪ್ರದೇಶದಲ್ಲಿರುವ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಸಲು ಸಭೆಯು ಸೂಚಿಸಲಾಯಿತು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಮತ್ತು ಇತ್ತೀಚಿನ ದಿನಗಳಲ್ಲಿ ಕರೋನಾ ಪ್ರಕರಣಗಳು ಹೆಚ್ಚಾಗುತ್ತಿರುವ ಕಾರಣ ಎಲ್ಲಾ ಅಧಿಕಾರಿ ವರ್ಗದವರಿಗೂ ಹಾಗೂ ಅವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಮುಂಜಾಗ್ರತಾ ಕ್ರಮಗಳನ್ನು (ಸರಿಯಾದ ರೀತಿಯಲ್ಲಿ ಮಾಸ್ಕ್ ಹಾಕುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಹಾಗೂ ಕೈಗಳನ್ನು ಆಗಾಗ್ಗೆ ಶುಚಿಗೊಳಿಸುವುದು) ವಹಿಸುವುದು ಅತ್ಯಾವಶ್ಯಕವಾಗಿರುತ್ತದೆ ಎಂದು ಸಭೆಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

***<u>ಪ್ರತಿಯನ್ನು</u>***

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ / ಕಛೇರಿ ಕಡತಕ್ಕೆ.